ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 20/07/2019

# ಸ್ಪೀಕರ್ ನಿರ್ಧಾರ ಅಂತಿಮ

20-7-19

**ಸಂ.ಕ. ಸಮಾಚಾರ ಮೈಸೂರು**

ಅವಿಶ್ವಾಸ ನಿರ್ಣಯ ಮಂಡಿಸುವಂತೆ ರಾಜ್ಯಪಾಲರು ನೀಡಿರುವ ಸಲಹೆಗೆ ಪ್ರತಿಕ್ರಿಯೆ ನೀಡಿದ ಸಚಿವ ರೇವಣ್ಣ, ಈ ಕುರಿತು ಸ್ಪೀಕರ್ ಅವರು ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆಂದು ಸಚಿವ ಎಚ್.ಡಿ. ರೇವಣ್ಣ ತಿಳಿಸಿದರು.

ಆಷಾಢ ಶುಕ್ರವಾರ ಪ್ರಯುಕ್ತ ಸತತ ಮೂರನೇ ಬಾರಿ ನಗರದ ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿದ ವೇಳೆ ಸುದ್ದಿಗಾರರೊಡನೆ ಮಾತನಾಡಿದರು, ಅವಿಶ್ವಾಸ ನಿರ್ಣಯದ ಬಗ್ಗೆ ರಾಜ್ಯಪಾಲರ ಬಳಿ ಸಮಯ ಕೇಳಿದ್ದೆವು. ಇದಕ್ಕೆ ನಿರ್ಣಯಕ್ಕೆ ಮೂರು ದಿನಾಂಕಗಳು ನಿಗದಿಯಾಗಿದ್ದು ಕಳೆದ ದಿನ ಈ ವಿಚಾರದ ಬಗ್ಗೆ ಚರ್ಚೆಯೂ ನಡೆದಿದೆ. ಅಲ್ಲದೆ, ಅವಿಶ್ವಾಸ ನಿರ್ಣಯ ಮತಕ್ಕೆ ಹಾಕುವಂತೆ ರಾಜ್ಯಪಾಲರು ಕುಮಾರಸ್ವಾಮಿ ಅವರಿಗೆ ಸೂಚಿಸಿದ್ದಾರೆ. ಆದರೆ ಈ ಬಗ್ಗೆ ಸ್ಪೀಕರ್ ತೀರ್ಮಾನ ಕೈಗೊಳ್ಳುತ್ತಾರೆ ಎಂದರು.

ಇನ್ನು, ಸುಪ್ರೀಂಕೋರ್ಟ್ ತೀರ್ಪಿನ ಹಿನ್ನೆಲೆ ಕೆಲವು ವಿಚಾರಗಳು ಸ್ಪಷ್ಟವಾಗಬೇಕಾಗಿದೆ, ಹೀಗಾಗಿ ಸದನದಲ್ಲಿ ಚರ್ಚೆ ನಡೆಯುತ್ತಿದೆ ಎಂದರಲ್ಲದೆ, ಅವಿಶ್ವಾಸ ನಿರ್ಣಯ ವಿಚಾರದಲ್ಲಿ, 1996 ರಲ್ಲಿ ಅಂದಿನ ಪ್ರಧಾನಿ ವಾಜಪೇಯಿ ಅವರು 10 ದಿನ ಕಾಲಾವಕಾಶ ತೆಗೆದುಕೊಳ್ಳಲಿಲ್ಲವೆ ಎಂದು ಸಚಿವ ಪ್ರಶ್ನಿಸಿದರು.